## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ಸದಸ್ಯರ ಹೆಸರು: | ಡಾ:ಧನಂಜಯ ಸರ್ಜಿ (ಪದವೀಧರ ಕ್ಷೇತ್ರ), |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: | 165 |
| ಉತ್ತರಿಸಬೇಕಾದ ದಿನಾಂಕ: | 05.03.2025 |
| ಉತ್ತರಿಸುವ ಸಚಿವರು | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಸ್ ಯೋಜನೆಜಾರಿಗೊಂಡಿದ್ದು ಯಾವಾಗ; ಯೋಜನೆಯ ಅವಧಿ ಯಾವಾಗ ಪೂರ್ಣಗೊಳ್ಳಲಿದೆ;</td><td>ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ):<br><br>ಈ ಯೋಜನೆಯು ದಿನಾಂಕ: 25.06.2015 ರಂದು ರಾಜ್ಯದಾದ್ಯಂತ ಜಾರಿಗೊಂಡಿರುತ್ತದೆ. ಸದರಿ ಯೋಜನೆಯ ಅವಧಿಯು ದಿನಾಂಕಃ 31.12.2025ಕ್ಕೆ ವಿಸ್ತರಿತ ಅವಧಿ ಮುಕ್ತಾಯಗೊಳ್ಳಲಿದೆ.<br><br>ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ):<br><br>ಈ ಯೋಜನೆಯು ದಿನಾಂಕ: 01.04.2016 ರಿಂದ ಜಾರಿಗೊಳಿಸಲಾಗಿದೆ. ಕೇಂದ್ರ ಸರ್ಕಾರವು 2024-2025ನೇ ಸಾಲಿನ ಆಯವ್ಯಯದಲ್ಲಿ ಸದರಿ ಯೋಜನೆಯನ್ನು ಮಾರ್ಚ್-2029 ರವರೆಗೆ ವಿಸ್ತರಿಸಿದೆ.</td></tr>
<tr><td>ಆ)</td><td>ಈ ಯೋಜನೆಯಡಿ ಎಷ್ಟು ಮನೆಗಳ ನಿರ್ಮಾಣಕ್ಕೆ ಗುರಿ ಹೊಂದಲಾಗಿದೆ ಮತ್ತು ಉದ್ದೇಶಿತ ಗುರಿ ಸಾಧಿಸಲಾಗಿದೆಯೇ;</td><td rowspan="2">ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ):<br><br>ಸದರಿ ಯೋಜನೆಯ ಅವಧಿಯಲ್ಲಿ ರಾಜ್ಯದಾದ್ಯಂತ ಒಟ್ಟು 4,54,692 ಮನೆಗಳನ್ನು ನಿರ್ಮಿಸುವ ಗುರಿ ಹೊಂದಲಾಗಿದೆ. ಈ ಯೋಜನೆಯಡಿ ಸಾಧಿಸಿರುವ ಪ್ರಗತಿಯ ವಿವರ ಈ ಕೆಳಗಿನಂತಿದೆ.<br><br><table><tr><th>ಅನುಮೋದನೆ</th><th>ಪೂರ್ಣ</th><th>ಪ್ರಗತಿ</th><th>ಪ್ರಾರಂಭವಾಗ ಬೇಕಿರುವ ಮನೆಗಳು</th></tr><tr><td>454692</td><td>255711</td><td>117441</td><td>81540</td></tr></table><br>ಪ್ರಧಾನ ಮಂತ್ರಿ ಆವಾಸ್ (ಗ್ರಾಮೀಣ):<br>ಸದರಿ ಯೋಜನೆಯ ಅವಧಿಯಲ್ಲಿ ರಾಜ್ಯದಾದ್ಯಂತ ಒಟ್ಟು 9,32,864 ಮನೆಗಳನ್ನು ನಿರ್ಮಿಸುವ ಗುರಿ ಹೊಂದಲಾಗಿದೆ. ಈ ಯೋಜನೆಯಡಿ ಸಾಧಿಸಿರುವ ಪ್ರಗತಿಯ ವಿವರ ಈ ಕೆಳಗಿನಂತಿದೆ.<br><br><table><tr><th>ಗುರಿ</th><th>ಅನುಮೋದನೆ / ಮಂಜೂರು</th><th>ಪೂರ್ಣ</th><th>ಪ್ರಗತಿ</th><th>ಆಯ್ಕೆ /ಪ್ರಾರಂಭವಾಗ ಬೇಕಿರುವ ಮನೆಗಳು</th></tr><tr><td>9,32,864</td><td>3,46,878</td><td>1,55,567</td><td>52,097</td><td>7,25,200</td></tr></table></td></tr>
<tr><td>ಇ)</td><td>ಹಾಗಿದ್ದಲ್ಲಿ, ಎಷ್ಟು ಮನೆಗಳ ನಿರ್ಮಾಣ ಮಾಡಲಾಗಿದೆ; ಈ ಪೈಕಿ ಕಾಮಗಾರಿ ಪೂರ್ಣಗೊಂಡಿರುವ ಮತ್ತು ಕಾಮಗಾರಿ ಪ್ರಗತಿಯಲ್ಲಿರುವ ಮನೆಗಳ ಸಂಖ್ಯೆ ಎಷ್ಟು;</td></tr>
</table>

| | | |
|---|---|---|
| ಈ) | ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ಹಂಚಿಕೆ ಮಾಡಲಾಗಿದೆ; | **ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ):** ಸದರಿ ಯೋಜನೆಯಡಿ ಈವರೆಗೆ 2,12,885 ಮನೆಗಳನ್ನು ಫಲಾನುಭವಿಗಳಿಗೆ ಹಂಚಿಕೆ ಮಾಡಲಾಗಿದೆ.<br><br>**ಪ್ರಧಾನ ಮಂತ್ರಿ ಆವಾಸ್ (ಗ್ರಾಮೀಣ):** ಸದರಿ ಯೋಜನೆಯಡಿ ಮಂಜೂರಾದ ಮನೆಗಳನ್ನು ಫಲಾನುಭವಿಗಳೇ ಸ್ವತಃ ನಿರ್ಮಾಣ ಮಾಡಿಕೊಳ್ಳುತ್ತಿದ್ದು, ಮನೆಗಳ ಪ್ರಗತಿಗೆ ಅನುಗುಣವಾಗಿ ಸರ್ಕಾರದಿಂದ ಸಹಾಯಧನ ಮಾತ್ರ ನೀಡಲಾಗುತ್ತಿದೆ. |
| ಉ) | ಪ್ರಸ್ತುತ ಪ್ರಗತಿಯಲ್ಲಿರುವ ಹಾಗೂ ಸ್ಥಗಿತಗೊಂಡಿರುವ ಮನೆಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಿ ಫಲಾನುಭವಿಗಳಿಗೆ ನೀಡಲಾಗುವುದು? | **ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ):** ಎ.ಹೆಚ್.ಪಿ ಘಟಕದಡಿ ನಿರ್ಮಿಸಲಾಗುತ್ತಿರುವ ಮನೆಗಳನ್ನು ಪೂರ್ಣಗೊಳಿಸಲು ಸರ್ಕಾರದ ಸಹಾಯಧನವನ್ನು ಹೊರತುಪಡಿಸಿ, ಬಾಕಿ ಮೊತ್ತವನ್ನು ಫಲಾನುಭವಿಗಳ ವಂತಿಕೆ/ಬ್ಯಾಂಕ್ ಸಾಲದ ಮೂಲಕ ಭರಿಸಬೇಕಾಗಿರುತ್ತದೆ. ಈ ಸಂಬಂಧ ಬ್ಯಾಂಕ್‌ಗಳೊಂದಿಗೆ ಸಮನ್ವಯ ಸಾಧಿಸಿ ಸಾಲ ಸೌಲಭ್ಯ ಒದಗಿಸಲು ಸರ್ಕಾರದ ಮಟ್ಟದಲ್ಲಿ ಕ್ರಮವಹಿಸಲಾಗುತ್ತಿದ್ದು, ಬಾಕಿ ಮನೆಗಳ ಕಾಮಗಾರಿಯನ್ನು ಹಂತ ಹಂತವಾಗಿ ಪೂರ್ಣಗೊಳಿಸಲಾಗುವುದು.<br><br>**ಪ್ರಧಾನ ಮಂತ್ರಿ ಆವಾಸ್ (ಗ್ರಾಮೀಣ):** ಸದರಿ ಯೋಜನೆಯಡಿ ಫಲಾನುಭವಿಗಳೇ ಸ್ವತಃ ಮನೆಗಳನ್ನು ನಿರ್ಮಾಣ ಮಾಡಿಕೊಳ್ಳುತ್ತಿದ್ದು ಫಲಾನುಭವಿಗಳ ಮನವೊಲಿಸಿ ಮನೆಗಳನ್ನು ಶೀಘ್ರದಲ್ಲಿ ಪೂರ್ಣ ಗೊಳಿಸಲು ಕ್ರಮವಹಿಸಲಾಗುತ್ತಿದೆ. |

ವಇ 46 ಹೆಚ್‌ಎಫ್‌ಎ 2025

**(ಬಿ.ಜೆಡ್ ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು.